ಕರ್ನಾಟಕ ವಿಧಾನ ಪರಿಷತ್ತು

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	449
2 ಸದಸ್ಯರ ಹೆಸರು	:	ಶ್ರೀ ಯು. ಬಿ. ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು)
3 ಉತ್ತರಿಸುವ ದಿನಾಂಕ	:	16-12-2021
4 ಉತ್ತರಿಸುವವರು	:	ಮುಖ್ಯಮಂತ್ರಿಗಳು

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ರಾಜಧಾನಿ ಬೆಂಗಳೂರಿನಲ್ಲಿ ಸತತ ಎಡಬಿಡದೆ ಸುರಿದ ಮಳೆಗೆ ಕಟ್ಟಡಗಳು ಕುಸಿದು ಬೀಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಆ	ಈವರೆಗೆ ಎಷ್ಟು ಕಟ್ಟಡಗಳು ಕುಸಿದು ಬಿದ್ದಿರುವುದು ವರದಿಯಾಗಿದೆ; ಮತ್ತು ಎಷ್ಟು ಕಟ್ಟಡಗಳು ಕುಸಿದು ಬೀಳುವ ಅಪಾಯದ ಅಂಚಿನಲ್ಲಿದೆ; ಈ ಸಂಬಂಧ ಸಮೀಕ್ಷೆ ಕೈಗೊಳ್ಳಲಾಗಿದೆಯೇ;	ಈವರೆಗೆ ಒಟ್ಟು 18 ಕಟ್ಟಡಗಳು ಕುಸಿದು ಬಿದ್ದಿರುವುದು ವರದಿಯಾಗಿರುತ್ತದೆ. ಕುಸಿದು ಬೀಳುವ ಅಪಾಯದ ಅಂಚಿನಲ್ಲಿರುವ ಕಟ್ಟಡಗಳ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಲಾಗಿದ್ದು, ಒಟ್ಟು 428 ಕಟ್ಟಡಗಳು ಕುಸಿದು ಬೀಳುವ ಅಪಾಯದ ಅಂಚಿನಲ್ಲಿರುವುದು ಸಮೀಕ್ಷೆಯಿಂದ ಕಂಡುಬಂದಿರುತ್ತದೆ.
ಇ	ಅಪಾಯದ ಅಂಚಿನಲ್ಲಿರುವ ಕಟ್ಟಡಗಳನ್ನು ತೆರವುಗೊಳಿಸಿ ನೆಲಸಮಗೊಳಿಸಲು ಹಾಗೂ ಸೂಕ್ತ ಪರಿಹಾರ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಅಪಾಯದ ಅಂಚಿನಲ್ಲಿರುವ ಕಟ್ಟಡಗಳನ್ನು ತೆರವುಗೊಳಿಸುವ ಸಂಬಂಧ ಬಿಬಿಎಂಪಿ ಕಾಯ್ದೆ 2020 ರನ್ವಯ ಕ್ರಮವಹಿಸಲಾಗುತ್ತಿರುತ್ತದೆ. ಮಳೆಯಿಂದಾಗಿ ಹಾನಿಗೊಳಗಾದ ಮನೆಗಳ ಪುನರ್ ನಿರ್ಮಾಣ / ದುರಸ್ಥಿ ಕಾರ್ಯವನ್ನು ಕೈಗೊಳ್ಳುವುದರ ಕುರಿತು ಪರಿಹಾರ ನೀಡುವುದರ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಕಂಇ 355 ಟಿಎನ್ಆರ್ 2021, ದಿನಾಂಕ: 13-08-2021 ರಂತೆ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ.

ಸಂಖ್ಯೆ: ನಅಇ 387 ಎಂಎನ್ಯು 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ